ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಆನ್‌ಲೈನ್ ಶಿಕ್ಷಣದ ಕುರಿತು

ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) :-

644(636) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊರೋನಾ ಸಂಕಷ್ಟದ ಸಮಯದಲ್ಲಿ ಸರಕಾರಿ ಶಾಲೆಯ ಮಕ್ಕಳಿಗೆ ಆನ್‌ಲೈನ್ ಮೂಲಕ ಶಿಕ್ಷಣ ನೀಡುತ್ತಿದ್ದು, ಅದಕ್ಕಾಗಿ ಪಠ್ಯ ಪುಸ್ತಕ ಮತ್ತು ನೋಟ್ ಪುಸ್ತಕಗಳನ್ನು ವಿತರಿಸಲಾಗಿದೆಯೇ;

(ಆ) 2020-2021 ರ ಶೈಕ್ಷಣಿಕ ವರ್ಷ ಪ್ರಾರಂಭವಾಗದಿದ್ದಲ್ಲಿ ಆನ್‌ಲೈನ್ ಮೂಲಕ ಪಾಠ ಕೇಳಿದ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಪರೀಕ್ಷೆಗಳನ್ನು ನಡೆಸಲಾಗುವುದೇ; ಅಥವಾ ಪರೀಕ್ಷೆಯೇ ಇಲ್ಲದೆ ಮುಂದಿನ ತರಗತಿಗೆ ಉತ್ತೀರ್ಣ ಎಂದು ಘೋಷಿಸಲಾಗುವುದೇ; ಈ ಕುರಿತು ಸರಕಾರದ ನಿಲುವೇನು;

(ಇ) ಮಕ್ಕಳಿಗೆ ಬಿಸಿಯೂಟ ವಿತರಿಸಲಾಗಿದೆಯೇ; ಇದಕ್ಕಾಗಿ ತೆಗೆದಿರಿಸಲಾದ ಅಕ್ಕಿ ಮತ್ತು ಇತರ ಸಾಮಾನುಗಳನ್ನು ಯಾವ ರೀತಿ ಬಳಕೆ ಮಾಡಿಕೊಳ್ಳಲಾಗಿದೆ;

(ಈ) ಬಿಸಿಯೂಟ ಸಿಬ್ಬಂದಿಗೆ ಗೌರದ ಧನ ಪಾವತಿಸಲಾಗಿದೆಯೇ; ಕೊರೋನಾ ಸಮಯದಲ್ಲಿ ಇವರಿಗೆ ಸರಕಾರದಿಂದ ಎಷ್ಟು ಸಹಾಯಧನ ನೀಡಲಾಗಿದೆ ?